# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 16-03-2021 ಪ್ರಶ್ನೆ ಸಂಖ್ಯೆ : 1145 (1444)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ )

ಉತ್ತರ ನೀಡಬೇಕಾದ ದಿನಾಂಕ : 16-03-2021

ಉತ್ತರಿಸುವ ಸಚಿವರು: ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು

ವಿಷಯ : ಆಹಾರ ಸಂಸ್ಕರಣಾ ಘಟಕಗಳು ಮತ್ತು ಬೃಹತ್ ಆಹಾರ ಸಂಕೀರ್ಣಗಳ ಸ್ಥಾಪನೆ

(ಅ) ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಬೃಹತ್ ಆಹಾರ ಸಂಕೀರ್ಣಗಳನ್ನು ನಿರ್ಮಿಸಲು ಉತ್ತೇಜನ ಮತ್ತು ಪ್ರೋತ್ಸಾಹ ನೀಡುತ್ತಿರುವುದು ನಿಜವೇ ;

(ಆ) ರಾಜ್ಯದಲ್ಲಿನ ಎಲ್ಲಾ ಜಿಲ್ಲೆಗಳಲ್ಲಿ ಆಹಾರ ಸಂಸ್ಕರಿಸುವ ಘಟಕಗಳನ್ನು ಸ್ಥಾಪಿಸಲು ರಾಜ್ಯ ಸರ್ಕಾರ ರೂಪಿಸಿರುವ ಯೋಜನೆಗಳು ಯಾವುವು ಮತ್ತು ಅವುಗಳು ಯಾವ ಹಂತದಲ್ಲಿವೆ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಈಗಾಗಲೇ ಕೇಂದ್ರ ಸರ್ಕಾರದ ಯೋಜನೆಯಡಿ ಮತ್ತು ನೆರವಿನೊಂದಿಗೆ ಸ್ಥಾಪಿತವಾಗಿರುವ ಬೃಹತ್ ಆಹಾರ ಸಂಕೀರ್ಣಗಳು (Mega Food Parks) ಯಾವುವು; ಮತ್ತು ಅವುಗಳು ನಿರ್ವಹಿಸುತ್ತಿರುವ ಕಾರ್ಯಗಳೇನು;( ಸಂಪೂರ್ಣ ವಿವರ ನೀಡುವುದು)

(ಈ) ರಾಜ್ಯದ ರೈತರ ಹಿತ ಕಾಪಾಡಲು ಅಧಿಕವಾಗಿ ಆಹಾರ ಧಾನ್ಯ ಬೆಳೆಯುವ ಜಿಲ್ಲೆಗಳಲ್ಲಿ ಬೃಹತ್ ಆಹಾರ ಸಂಕೀರ್ಣ (Mega Food Parks) ಗಳನ್ನು ಸ್ಥಾಪಿಸಲು ಯೋಜನೆಯನ್ನು ರೂಪಸಿದೆಯೇ? (ಪೂರ್ಣ ವಿವರ ನೀಡುವುದು)